# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 640(749)
ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)

ಉತರಿಸಬೇಕಾದ ದಿನಾಂಕ : 10-03-2026.
ಉತ್ತರಿಸುವ ಸಚಿವರು : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 2025-26ನೇ ಸಾಲಿನಲ್ಲಿ ಹಜ್ ಯಾತ್ರೆಗೆ ಅರ್ಜಿ ಸಲ್ಲಿಸಿದವರ ಸಂಖ್ಯೆ ಎಷ್ಟು ಮತ್ತು ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಯಾದವರ ಸಂಖ್ಯೆ ಎಷ್ಟು; | 2025-26ನೇ ಸಾಲಿನಲ್ಲಿ ಹಜ್ ಯಾತ್ರೆಗೆ 17412 ಅರ್ಜಿಗಳು ಸ್ವೀಕೃತವಾಗಿದ್ದು, ಮುಂಬೈನ ಭಾರತೀಯ ಹಜ್ ಸಮಿತಿ ಇವರು ನವದೆಹಲಿಯಲ್ಲಿ ದಿನಾಂಕ:13-08-2025ರಂದು ಕೈಗೊಂಡ ಆನ್‌ಲೈನ್‌ಲಾಟರಿ ಪ್ರಕ್ರಿಯೆಯಲ್ಲಿ ಒಟ್ಟು 7613 ಯಾತ್ರಿಕರು ಆಯ್ಕೆಯಾಗಿರುತ್ತಾರೆ. |
| ಆ) | ಮಂಗಳೂರು ಮತ್ತು ಹುಬ್ಬಳ್ಳಿ ವಿಮಾನ ನಿಲ್ದಾಣಗಳಿಂದ ನೇರವಾಗಿ ಹಜ್ ಯಾತ್ರೆಗೆ ತೆರಳಲು ವಿಮಾನಯಾನ ವ್ಯವಸ್ಥೆ ಕಲ್ಪಿಸಲಾಗಿದೆಯೇ; | 2009ನೇ ಸಾಲಿನಿಂದ ಮಂಗಳೂರು ವಿಮಾನ ನಿಲ್ದಾಣದಿಂದ ನೇರವಾಗಿ ಹಜ್ ಯಾತ್ರೆಗೆ ತೆರಳುತ್ತಿದ್ದ ವಿಮಾನಯಾನ ವ್ಯವಸ್ಥೆಯನ್ನು 2019ರ ಕೋವಿಡ್ ಮಹಾಮಾರಿಯ ನಂತರ ಸ್ಥಗಿತಗೊಳಿಸಲಾಗಿದೆ. ಹುಬ್ಬಳ್ಳಿ ವಿಮಾನ ನಿಲ್ದಾಣದಿಂದ ನೇರವಾಗಿ ಹಜ್ ಯಾತ್ರೆಗೆ ತೆರಳುವ ವಿಮಾನಯಾನದ ವ್ಯವಸ್ಥೆ ಇರುವುದಿಲ್ಲ. |
| ಇ) | ಹಜ್ ಯಾತ್ರೆಗೆ ತೆರಳುವ ಯಾತ್ರಾರ್ಥಿಗಳಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳು ಮತ್ತು ಸಹಾಯಧನ (Subsidy) ಎಷ್ಟು; ಸಹಾಯಧನದ ಮೊತ್ತವೆಷ್ಟು ಹೆಚ್ಚುವರಿ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; | ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ ಈ ಕೆಳಕಂಡ ಸೌಕರ್ಯ/ಸೌಲಭ್ಯವನ್ನು ಒದಗಿಸಲಾಗುತ್ತಿದೆ.<br><br>1. ಹಜ್ ಯಾತ್ರೆಗಾಗಿ ಅರ್ಜಿದಾರರು ಆನ್‌ಲೈನ್ ಮೂಲಕ ಮುಂಬೈನ ಭಾರತೀಯ ಹಜ್ ಸಮಿತಿಯವರು ನೀಡಿರುವ ಮಾನದಂಡಗಳನ್ನು ಅನುಸರಿಸಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅದರಂತೆ, ಸ್ವೀಕೃತವಾದ ಅರ್ಜಿಗಳನ್ನು ಪರಿಶೀಲನೆ ಮಾಡುವುದು, ದಾಖಲೆಗಳನ್ನು ಸ್ಕ್ಯಾನ್ ಮಾಡುವುದು, ಮುಂಬೈನ ಭಾರತೀಯ ಹಜ್ ಸಮಿತಿಯ ಸರ್ವರ್‌ನಲ್ಲಿ ಅಪ್‌ಲೋಡ್ ಮಾಡಲು ಸೂಕ್ತ ಸಹಕಾರ ನೀಡಲಾಗುವುದು.<br>2. ಮುಂಬೈನ ಭಾರತೀಯ ಹಜ್ ಸಮಿತಿಯ ವತಿಯಿಂದ ಕಲ್ಪಿಸಿರುವ ಕೇಂದ್ರಿಕೃತ ವೆಬ್ ಸರ್ವರ್‌ನಿಂದ ಗಣಕೀಕೃತ ಲಾಟರಿ (ಖುರ್ರಾ) ಮುಖಾಂತರ ಜಿಲ್ಲಾವಾರು ನಿಗದಿಪಡಿಸಿರುವ ಕೋಟಾದನ್ವಯ ಹಜ್ ಯಾತ್ರಿಕರ ಆಯ್ಕೆ ಪ್ರಕ್ರಿಯೆ ಆಯೋಜಿಸುವುದು.<br><br>3. ಆಯ್ಕೆಯಾದ ಹಜ್ ಯಾತ್ರಿಕರಿಂದ ಅಂತರರಾಷ್ಟ್ರೀಯ ಪಾಸ್‌ಪೋರ್ಟ್‌ಗಳನ್ನು, ವೈದ್ಯಕೀಯ ಪ್ರಮಾಣ ಪತ್ರ ಮತ್ತು ಇನ್ನಿತರೆ ಅಗತ್ಯ ದಾಖಲೆಗಳನ್ನು ಸಂಗ್ರಹ ಮಾಡಿ, ಮುಂಬೈನ ಭಾರತೀಯ ಹಜ್ ಸಮಿತಿಯ ಕಚೇರಿಗೆ ವರ್ಗಾಯಿಸುವುದು.<br>4. ಆಯ್ಕೆಯಾದ ಯಾತ್ರಿಕರಿಗೆ ಹಾಗೂ ಖಾಸಗಿಯಾಗಿ ಹಜ್ ಯಾತ್ರೆಗೆ ಪ್ರಯಾಣಿಸುವ ಯಾತ್ರಿಕರೂ ಸೇರಿದಂತೆ ಮೆನಂಜೈಟಿಸ್ ಲಸಿಕೆ ಚುಚ್ಚು ಮದ್ದು ಜಿಲ್ಲಾವಾರು ಕಾರ್ಯಕ್ರಮವನ್ನು ಆರೋಗ್ಯ ಮತ್ತು ಕುಟುಂಬ |

| | | |
|---|---|---|
| | | ಕಲ್ಯಾಣ ಇಲಾಖೆಯ ಸಹಕಾರದಿಂದ ಆಯೋಜಿಸುವುದು.<br>5. ಯಾತ್ರಿಕರಿಗೆ ಹಜ್ ಯಾತ್ರೆಯು ಸುಗಮವಾಗಿ ಹಾಗೂ ಸುಖಕರವಾಗಿ ಮಾಡಲು ಸಹಾಯಕವಾಗುವಂತೆ ತರಬೇತಿ (ಓರಿಯಂಟೇಷನ್) ಕಾರ್ಯಕ್ರಮವನ್ನು ರಾಜ್ಯ ಹಜ್ ಸಮಿತಿಯು ಆಯೋಜಿಸುತ್ತದೆ.<br>6. ಸೌದಿ ಅರೇಬಿಯಾದಲ್ಲಿ ಕರ್ನಾಟಕ ರಾಜ್ಯದಿಂದ ಆಗಮಿಸುವ ಹಜ್ ಯಾತ್ರಿಕರ ಕಲ್ಯಾಣವನ್ನು ನೋಡಿಕೊಳ್ಳಲು ಹಜ್ ಸ್ವಯಂ ಸೇವಕರನ್ನು (ಖಾದಿಮುಲ್ ಹುಜ್ಜಾಜ್) ರವರನ್ನು ನಿಯೋಜಿಸುವುದು.<br>7. ಭಾರತೀಯ ಹಜ್ ಸಮಿತಿಯಿಂದ ಸ್ವೀಕೃತವಾಗುವ ಕನ್ನಡ, ಇಂಗ್ಲೀಷ್ ಮತ್ತು ಉರ್ದು ಭಾಷೆಗಳಲ್ಲಿ ಹಜ್ ಗೈಡ್ ಪುಸ್ತಕಗಳನ್ನು ಪ್ರತಿ ವರ್ಷ ಆಯ್ಕೆಯಾದ ಹಜ್ ಯಾತ್ರಿಕರಿಗೆ ಉಚಿತವಾಗಿ ಸರಬರಾಜು ಮಾಡುವುದು.<br>8. ಯಾವುದೇ ಹಜ್ ಸಂಬಂಧಿತ ಮಾಹಿತಿಯನ್ನು ಯಾತ್ರಾರ್ಥಿಗಳಿಗೆ ತಲುಪಿಸುವುದು.<br>9. ಹಜ್ ಯಾತ್ರಿಗಳ ಸುಗಮ, ಸುಖಕರ ಪ್ರಯಾಣಕ್ಕಾಗಿ ಹಾಗೂ ಸೌದಿ ಅರೇಬಿಯಾಕ್ಕೆ ಹಜ್ ಯಾತ್ರಾರ್ಥಿಗಳ ಪ್ರಯಾಣ ಆರಂಭವಾಗುವ ಮುನ್ನ ರಾಜ್ಯ ಹಜ್ ಸಮಿತಿಯು ಹಜ್ ಕ್ಯಾಂಪನ್ನು ಬೆಂಗಳೂರಿನ ಹಜ್ ಭವನದಲ್ಲಿ ಆಯೋಜಿಸುತ್ತಿದ್ದು, ಈ ಹಜ್ ಕ್ಯಾಂಪ್‌ನಲ್ಲಿ ತಮ್ಮ ಪ್ರಯಾಣಕ್ಕೆ ಮುನ್ನ ಹಜ್ ಯಾತ್ರಿಗಳು ಉಳಿದುಕೊಳ್ಳಲು ಎಲ್ಲಾ ವ್ಯವಸ್ಥೆಯನ್ನು (ಬೋರ್ಡಿಂಗ್ ಮತ್ತು ಲಾಡ್ಜಿಂಗ್) ರಾಜ್ಯ ಹಜ್ ಸಮಿತಿಯು ಮಾಡುತ್ತಿದ್ದು, ಕಾಗದ ಪತ್ರಗಳ ಹಂಚಿಕೆಯ ವ್ಯವಸ್ಥೆ, ವಿದೇಶಿ ವಿನಿಮಯ ಹಂಚಿಕೆಯ ವ್ಯವಸ್ಥೆ, ಯಾತ್ರಾರ್ಥಿಗಳನ್ನು ವಿಮಾನ ನಿಲ್ದಾಣಕ್ಕೆ ತಲುಪಿಸುವ ಸಾರಿಗೆ ವ್ಯವಸ್ಥೆ ಹಾಗೂ ಇನ್ನಿತರೇ ವ್ಯವಸ್ಥೆಗಳನ್ನು ಹಜ್ ಕ್ಯಾಂಪ್ ಗಳಲ್ಲಿಯೇ ಸಂಬಂಧಪಟ್ಟ ಇಲಾಖೆಗಳ ಸಹಕಾರದಿಂದ ಒದಗಿಸಲಾಗುತ್ತದೆ.<br>10. ಹಜ್ ವಿಮಾನ ಕಾರ್ಯಾಚರಣೆ ಇತ್ಯಾದಿಗಳ ಯಶಸ್ವಿ ವ್ಯವಸ್ಥೆಗಾಗಿ, ಭಾರತ ಸರ್ಕಾರ, ರಾಜ್ಯ ಸರ್ಕಾರ, ಮುಂಬೈನ ಭಾರತೀಯ ಹಜ್ ಸಮಿತಿ ಮತ್ತು ಇನ್ನಿತರೇ ಸಂಸ್ಥೆಗಳಾದ ಸೌದಿ ಅರೇಬಿಯನ್ ಏರ್‌ಲೈನ್ / ಏರ್ ಇಂಡಿಯಾ, ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ, ಕೆಂಪೇಗೌಡ ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್, ಇಮ್ಮಿಗ್ರೇಷನ್, ಕಸ್ಟಮ್ಸ್, ಪೊಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಇತರೇ ಸ್ವಯಂ ಸೇವಾ ಸಂಸ್ಥೆಗಳೊಂದಿಗೆ ಸಮನ್ವಯ ಸಾಧಿಸುವುದು.<br>11. ಹಜ್ ವಿಮಾನಗಳಲ್ಲಿ ಪ್ರಯಾಣಿಸುವ ಯಾತ್ರಿಕರ ನಿರ್ಗಮನ ಹಾಗೂ ಆಗಮನದ ಸಮಯಗಳಲ್ಲಿ ವಸತಿ, ಸಾರಿಗೆ ಇತ್ಯಾದಿಗಳಿಗೆ ಸಹಾಯಕ ವ್ಯವಸ್ಥೆಗಳನ್ನು ಮಾಡುವುದು.<br><br>ಕರ್ನಾಟಕ ರಾಜ್ಯ ಹಜ್ ಸಮಿತಿಯ ವತಿಯಿಂದ ಪ್ರತಿ ವರ್ಷ ಯಾತ್ರಾರ್ಥಿಗಳು ತಮ್ಮ ಸ್ವಂತ ಖರ್ಚಿನಿಂದ ಹಜ್ ಯಾತ್ರೆಗೆ ಪ್ರಯಾಣ ಕೈಗೊಳ್ಳುತ್ತಿದ್ದು, ಈ ಯಾತ್ರಾರ್ಥಿಗಳಿಗೆ ಕರ್ನಾಟಕ ರಾಜ್ಯ ಹಜ್ ಸಮಿತಿ / ರಾಜ್ಯ ಮತ್ತು ಕೇಂದ್ರ ಸರ್ಕಾರದ ವತಿಯಿಂದ ಆರ್ಥಿಕವಾಗಿ ಯಾವುದೇ ರೀತಿಯ ಅನುದಾನ / ಸಹಾಯಾನುದಾನ (Subsidy) ನೀಡಲಾಗುವುದಿಲ್ಲ. ಆದುದರಿಂದ, ಸಹಾಯಧನದ ಮೊತ್ತವನ್ನು ಹೆಚ್ಚುವರಿ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. |
| ಈ | ಬೆಂಗಳೂರಿನ ಹಜ್ | ಬೆಂಗಳೂರಿನ ಹಜ್ ಭವನದಲ್ಲಿ ಯಾತ್ರಾರ್ಥಿಗಳಿಗಾಗಿ ಮೇಲೆ |

| | | |
|---|---|---|
| | ಭವನದಲ್ಲಿ ಯಾತ್ರಾರ್ಥಿಗಳಿಗೆ ಸಮರ್ಪಕ ಸೌಲಭ್ಯ ಹಾಗೂ ತರಬೇತಿ ಶಿಬಿರಗಳನ್ನು ನೀಡಲಾಗುತ್ತಿದೆಯೇ? (ವಿವರ ಒದಗಿಸುವುದು) | ವಿವರಿಸಿರುವ ಸೌಲಭ್ಯ/ಸೌಕರ್ಯಗಳನ್ನು ಒದಗಿಸಲಾಗುತ್ತಿದೆ.<br><br>ಮುಂದುವರೆದು, ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಮುಂಬೈನ ಭಾರತೀಯ ಹಜ್ ಸಮಿತಿ ಮತ್ತು ಇನ್ನಿತರೇ ಸಂಸ್ಥೆಗಳಾದ ಸೌದಿ ಅರೇಬಿಯನ್ ಏರ್‌ಲೈನ್ಸ್/ ಏರ್ ಇಂಡಿಯಾ, ಏರ್‌ಪೋರ್ಟ್ ಅಥಾರಿಟಿ ಆಫ್ ಇಂಡಿಯಾ, ಇಮ್ಮಿಗ್ರೇಷನ್, ಕಸ್ಟಮ್ಸ್, ಪೊಲೀಸ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಇತರೇ ಸ್ವಯಂ ಸೇವಾ ಸಂಸ್ಥೆಗಳ ಸಹಭಾಗಿತ್ವ ಮತ್ತು ಅಗತ್ಯ ಸಮನ್ವಯದೊಂದಿಗೆ ಸದರಿ ಹಜ್ ಯಾತ್ರಾರ್ಥಿಗಳು ಸುಗಮ ಮತ್ತು ಯಶಸ್ವಿ ವಿಮಾನಯಾನವನ್ನು ಕೈಗೊಳ್ಳಲು ಕ್ರಮ ವಹಿಸಲಾಗುತ್ತದೆ.<br><br>ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಕೋಲಾರ, ಚಿಕ್ಕಬಳ್ಳಾಪುರ, ತುಮಕೂರು, ಬೆಂಗಳೂರು ದಕ್ಷಿಣ ಜಿಲ್ಲೆಗಳಿಂದ ಹಜ್ ಯಾತ್ರೆಯನ್ನು ಕೈಗೊಳ್ಳಲು ಪ್ರತಿ ವರ್ಷ ಆಯ್ಕೆಯಾಗುವ ಹಜ್ ಯಾತ್ರಿಗಳಿಗೆ ತಂಡ ತಂಡವಾಗಿ ತರಬೇತಿ ಶಿಬಿರಗಳನ್ನು ಬೆಂಗಳೂರಿನ ಹಜ್ ಭವನದಲ್ಲಿ ಆಯೋಜಿಸಲಾಗುತ್ತಿದೆ. |

ಸಂಖ್ಯೆ: **MWD 14 LMQ 2026**

(ರಹೀಂ ಖಾನ್ )
ಪೌರಾಡಳಿತ ಮತ್ತು ಹಜ್ ಸಚಿವರು

ರಹೀಂ ಖಾನ್
ಪೌರಾಡಳಿತ ಮತ್ತು ಹಜ್ ಸಚಿವರು